ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT: ರಾಜ್ಯಪಾಲರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ     ದಿನಾಂಕ : DATE 16/2/21

# ಗೋಹತ್ಯೆ ನಿಷೇಧ ಮಸೂದೆಗೆ ರಾಜ್ಯಪಾಲ ವಾಲಾ ಅಂಕಿತ

ಕ.ಪ್ರ. 16-2-21

ಬೆಂಗಳೂರು: ವಿಪಕ್ಷಗಳ ತೀವ್ರ ವಿರೋಧದ ನಡುವೆಯೇ ವಿಧಾನಮಂಡಲದ ಉಭಯ ಸದನಗಳಲ್ಲಿ ಅಂಗೀಕೃತಗೊಂಡಿದ್ದ 'ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕ -2020'ಕ್ಕೆ ರಾಜ್ಯಪಾಲ ವಿ.ಆರ್.ವಾಲಾ ಅವರು ಸಹಿ ಹಾಕಿದ್ದಾರೆ. ಫೆ.12ರಂದು ರಾಜ್ಯಪಾಲರು ಸಹಿ ಹಾಕಿದ್ದು, ಸಂಸದೀಯ ವ್ಯವಹಾರಗಳ ಹಾಗೂ ಶಾಸನ ರಚನೆ ಸಚಿವಾಲಯ ಕಾಯಿದೆ ಬಗ್ಗೆ ಅಧಿಕೃತವಾಗಿ ರಾಜ್ಯಪತ್ರ ಪ್ರಕಟಿಸಿದೆ. ಹೀಗಾಗಿ ಇನ್ನು ಮುಂದೆ ರಾಜ್ಯದಲ್ಲಿ ಜಾನುವಾರು ಹತ್ಯೆ, ಯಾವುದೇ ರೂಪದಲ್ಲಿರುವ ಜಾನುವಾರು ಮಾಂಸದ ಸಾಗಾಣಿಕೆ ಸಂಪೂರ್ಣ ನಿಷೇಧಿಸಲ್ಪಟ್ಟಿದೆ. ಆಕಳು, ಆಕಳ ಕರು ಮತ್ತು ಗೂಳಿ, ಎತ್ತು ಮತ್ತು ಹದಿಮೂರು ವರ್ಷದೊಳಗಿನ ಎಮ್ಮೆ, ಕೋಣಗಳನ್ನು ಜಾನುವಾರು ಎಂದು ಪರಿಗಣಿಸಬೇಕು. ಅಂತಹ ಜಾನುವಾರುಗಳನ್ನು ಯಾವುದೇ ವ್ಯಕ್ತಿಯೂ ಹತ್ಯೆ ಮಾಡಬಾರದು. ಕಾಯಿದೆಯ ನಿಯಮಗಳ ಉಲ್ಲಂಘನೆಗೆ 3 ವರ್ಷಗಳಿಗೆ ಕಡಿಮೆ ಇಲ್ಲದ ಹಾಗೂ 7 ವರ್ಷದವರೆಗೆ ವಿಸ್ತರಿಸಬಹುದಾದ ಜೈಲು ಶಿಕ್ಷೆ, ಒಂದು ಜಾನುವಾರು ಹತ್ಯೆಗೆ 50 ಸಾವಿರ ರು.ಗಳಿಂದ 5 ಲಕ್ಷ ರು.ವರೆಗೆ ದಂಡ ವಿಧಿಸಲಾಗುವುದು. ಎರಡನೇ ಅಪರಾಧಕ್ಕೆ 1 ಲಕ್ಷ ರು.ಗಳಿಂದ 10 ಲಕ್ಷ ರು.ವರೆಗೆ ದಂಡ ಹಾಗೂ 7 ವರ್ಷದವರೆಗೆ ಜೈಲು ಶಿಕ್ಷೆ ವಿಧಿಸಲು ಅವಕಾಶ ಕಲ್ಪಿಸಲಾಗಿದೆ.



**ರಾಜ್ಯಪತ್ರ ಪ್ರಕಟ: ರಾಜ್ಯದಲ್ಲಿನ್ನು ಜಾನುವಾರು ಹತ್ಯೆ, ಮಾಂಸ ಸಾಗಣೆ ನಿಷಿದ್ಧ**